**All India Radio: Bangalore**
**Regional Bulletin In Kannada**
**27.04.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಗ್ಯಾರಂಟಿ ಯೋಜನೆಗಳಿಗೆ ೮೦ ಸಾವಿರ ಕೋಟಿ ರೂಪಾಯಿ ಅನುದಾನ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ಬಾಗಲಕೋಟೆಯ ಮುಧೋಳದಲ್ಲಿ ಸೇಬು ಬೆಳೆದ ಬಗ್ಗೆ ಪ್ರಧಾನಿ ಗುಣಗಾನ - ಮನದ ಮಾತಿನಲ್ಲಿ ರೈತನ ಕಾರ್ಯಕ್ಕೆ ಶ್ಲಾಘನೆ
3. ಸರ್ಕಾರಿ ಗೌರವಗಳೊಂದಿಗೆ ಇಸ್ರೋ ಮಾಜಿ ಅಧ್ಯಕ್ಷ ಡಾ.ಕಸ್ತೂರಿ ರಂಗನ್ ಅಂತ್ಯಕ್ರಿಯೆ
4. ರಾಜ್ಯದಲ್ಲಿ ಒಂದು ವಾರ ಗುಡುಗು ಸಹಿತ ಮಳೆ ಸಾಧ್ಯತೆ; ೧೯ ಜಿಲ್ಲೆಗಳಿಗೆ ಹಳದಿ ಅಲರ್ಟ್ ಘೋಷಣೆ
5. ಕೊಡವರ ಮುದ್ದಂಡ ಕಪ್ ಹಾಕಿ ಟೂರ್ನಿ; ಮಂಡೆಪಂಡ ತಂಡಕ್ಕೆ ಚೇಂದಂಡ ವಿರುದ್ಧ ಜಯ

<><><><>

ಅಧಿಕಾರಕ್ಕೆ ಬಂದ ಎರಡು ವರ್ಷಗಳಲ್ಲಿ ಸರ್ಕಾರ ಇಲ್ಲಿಯವರೆಗೆ ಗ್ಯಾರಂಟಿ ಯೋಜನೆಗಳ ಮೂಲಕ ೮೦ ಸಾವಿರ ಕೋಟಿ ರೂಪಾಯಿ ನೀಡಲಾಗಿದ್ದು, ಈ ವರ್ಷವೂ ೫೦ ಸಾವಿರ ಕೋಟಿ ರೂಪಾಯಿಗಳನ್ನು ಬಜೆಟ್‌ನಲ್ಲಿ ಮೀಸಲಿರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯಲ್ಲಿ ನಡೆದ ವಿವಿಧ ಕಾಮಗಾರಿಗಳ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಸರ್ಕಾರದಲ್ಲಿ ಅಭಿವೃದ್ಧಿಗೆ ಹಣ ಇಲ್ಲ ಖಜಾನೆ ಖಾಲಿಯಾಗಿದೆ ಎಂಬ ವಿಪಕ್ಷದವರ ಟೀಕೆಯಲ್ಲಿ ಎಳ್ಳಷ್ಟೂ ಸತ್ಯವಿಲ್ಲ ಎಂದು ಹೇಳಿದ್ದಾರೆ.

**ಧ್ವನಿ: ಮುಖ್ಯಮಂತ್ರಿ**

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಹಾಲಿನ ಬೆಲೆ ಏರಿಕೆ ಬಗ್ಗೆ ರೈತರಿಗೆ ಬೆಂಬಲ ನೀಡಬೇಕಿದ್ದವರು ಹೋರಾಟ ಮಾಡುತ್ತಿರುವುದು ವಿಷಾದಕರ ಎಂದು ತಿಳಿಸಿದ್ದಾರೆ. ಇದೇ ವೇಳೆ ಸರ್ಕಾರದ ಎರಡು ವರ್ಷದ ಸಾಧನೆಗಳ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು. ವಿವಿಧ

ಯೋಜನೆಗಳ ಫಲಾನುಭವಿಗಳಿಗೆ ಹಕ್ಕು ಪತ್ರ ಹಾಗೂ ಸವಲತ್ತುಗಳ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಅಪರಾಧಿಗಳಿಗೆ ಹಾಗೂ ಸೂತ್ರಧಾರರಿಗೆ ಶೀಘ್ರವೇ ತಕ್ಕ ಉತ್ತರ ನೀಡಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ. ಆಕಾಶವಾಣಿಯ ತಮ್ಮ ೧೨೧ನೇ ಮನ್ ಕಿ ಬಾತ್‌ನಲ್ಲಿಂದು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಅವರು, ಪಹಲ್ಗಾಮ್‌ನಲ್ಲಿ ಸಾವನ್ನಪ್ಪಿದವರ ಕುಟುಂಬಸ್ಥರಿಗೆ ನ್ಯಾಯ ಒದಗಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಮ್ಯಾನ್ಮಾರ್ ಭೂಕಂಪ ಪೀಡಿತ ಪ್ರದೇಶದಲ್ಲಿ ಆಪರೇಷನ್ ಬ್ರಹ್ಮದಲ್ಲಿ ಭಾಗವಹಿಸಿದ ಪ್ರತಿಯೊಬ್ಬ ಯೋಧನ ಬಗ್ಗೆ ತುಂಬಾ ಹೆಮ್ಮೆಯಿದೆ ಎಂದು ತಿಳಿಸಿದ್ದಾರೆ. ಬಿಕ್ಕಟ್ಟಿನ ಸಮಯದಲ್ಲಿ ಸ್ನೇಹಿತನಾಗಿ ಭಾರತದ ಸಿದ್ಧತೆ ಮತ್ತು ಮಾನವೀಯತೆಗೆ ದೇಶ ಹೆಗ್ಗುರುತಾಗಿದೆ ಎಂದು ಹೇಳಿದ್ದಾರೆ. ದೇಶಾದ್ಯಂತ ವಿಶ್ವ ಪರಿಸರ ದಿನದ ಅಂಗವಾಗಿ ತಾಯಿಯ ಹೆಸರಿನಲ್ಲಿ ೧೪೦ ಕೋಟಿಗಿಂತಲೂ ಅಧಿಕ ಸಸಿಗಳನ್ನು ನೆಡಲಾಗಿದೆ. ಭಾರತದ ಈ ಉಪಕ್ರಮವನ್ನು ನೋಡಿ ವಿದೇಶಗಳಲ್ಲಿಯೂ ಜನರು ತಮ್ಮ ತಾಯಂದಿರ ಹೆಸರಿನಲ್ಲಿ ಗಿಡಗಳನ್ನು ನೆಟ್ಟಿದ್ದಾರೆ. ದೇಶದ ಜನತೆ ಈ ಅಭಿಯಾನದಲ್ಲಿ ಭಾಗವಾಗಬೇಕು ಎಂದು ಮನವಿ ಮಾಡಿದ್ದಾರೆ.

<><><>

ಬೆಟ್ಟಗುಡ್ಡಗಳಲ್ಲಿ ಬೆಳೆಯಲಾಗುವ ಸೇಬನ್ನು ಕರ್ನಾಟಕದಲ್ಲಿಯೂ ಬೆಳೆಯಲಾಗುತ್ತಿದೆ ಎಂದು ಮನ್ ಕಿ ಬಾತ್‌ನಲ್ಲಿ ಪ್ರಧಾನಿ ಪ್ರಸ್ತಾಪಿಸಿದ್ದಾರೆ. ಬಾಗಲಕೋಟೆಯ ರೈತ ಶ್ರೀಶೈಲ್ ತೇಲಿ ೩೫ ಡಿಗ್ರಿಗಿಂತ ಅಧಿಕ ತಾಪಮಾನವಿರುವ ಬಯಲು ಪ್ರದೇಶದಲ್ಲಿ ಸೇಬು ಬೆಳೆದಿರುವ ಕುರಿತು ಅಚ್ಚರಿ ವ್ಯಕ್ತಪಡಿಸಿದ್ದಾರೆ.

**ಧ್ವನಿ: ಪ್ರಧಾನಿ ಮೋದಿ**

ಶ್ರೀಶೈಲ ತೇಲಿ ತಮ್ಮ ಏಳು ಎಕರೆ ಜಮೀನಿನಲ್ಲಿ ಸಾವಯವ ವಿಧಾನದಿಂದ ಸೇಬು ಬೆಳೆದು ಅವರು ಲಕ್ಷಾಂತರ ರೂಪಾಯಿ ಆದಾಯ ಗಳಿಸುತ್ತಿದ್ದಾರೆ. ಈ ಯಶಸ್ಸಿನಿಂದ ಅವರು ಇತರ ರೈತರಿಗೆ ಸ್ಫೂರ್ತಿಯಾಗಿದ್ದಾರೆ. ಬಾಗಲಕೋಟೆ, ಬೆಳಗಾವಿ, ವಿಜಯಪುರದ ಸ್ಥಳೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ ಕೈ ತುಂಬ ಆದಾಯ ಪಡೆಯುತ್ತಿದ್ದಾರೆ. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್‌ನಲ್ಲಿ ಪ್ರಸ್ತಾಪಿಸಿರುವ ಬಗ್ಗೆ ಆಕಾಶವಾಣಿಯೊಂದಿಗೆ ಶ್ರೀಶೈಲ ತೇಲಿ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ: ತೇಲಿ**

<><><>

ಪ್ರಧಾನಿ ಮೋದಿ ಜಮ್ಮುಕಾಶ್ಮೀರದಲ್ಲಿದ್ದ ಆರ್ಟಿಕಲ್ ೩೭೦ ರದ್ದುಗೊಳಿಸಿದ ನಂತರ ಪ್ರವಾಸೋದ್ಯಮದಿಂದಲೇ ಎಂಟು, ಒಂಭತ್ತು ಸಾವಿರ ಕೋಟಿ ಆದಾಯ ಗಳಿಸಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಭಯೋತ್ಪಾದಕ ಕಡಿಮೆಯಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ವಿ.ಸೋಮಣ್ಣ**

<><><>

ಪಾಕಿಸ್ತಾನದ ವಿರುದ್ಧ ಯುದ್ಧ ಬೇಡ ಎಂಬ ಹೇಳಿಕೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ಷಮೆಯಾಚಿಸುವಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಅವರ ಬಾಲಿಶ ಹೇಳಿಕೆಯಾಗಿದ್ದು, ಮುಖ್ಯಮಂತ್ರಿ ಸ್ಥಾನಕ್ಕೆ ಘನತೆ ತರುವುದಿಲ್ಲ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮುಖ್ಯಮಂತ್ರಿ ಈ ಹೇಳಿಕೆ ಕ್ಷಮಿಸಲಾಗದ ಅಪರಾಧ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಖ್ಯಾತ ಬಾಹ್ಯಾಕಾಶ ವಿಜ್ಞಾನಿ, ಇಸ್ರೋ ಮಾಜಿ ಅಧ್ಯಕ್ಷ, ರಾಷ್ಟ್ರೀಯ ಶಿಕ್ಷಣ ನೀತಿಯ ಶಿಲ್ಪಿ ಡಾ. ಕೃಷ್ಣಸ್ವಾಮಿ ಕಸ್ತೂರಿರಂಗನ್ ಅಂತ್ಯಕ್ರಿಯೆ ಇಂದು ಬೆಂಗಳೂರಿನಲ್ಲಿ ಸರ್ಕಾರಿ ಗೌರವಗಳೊಂದಿಗೆ ನಡೆಯಿತು. ಇದಕ್ಕೂ ಮೊದಲು ರಾಮನ್ ಸಂಶೋಧನಾ ಸಂಸ್ಥೆ ಆವರಣದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೇರಿದಂತೆ ಹಲವಾರು ಗಣ್ಯರು ಪಡೆದುಕೊಂಡರು.

<><><>

ಮಡಿಕೇರಿಯಲ್ಲಿ ನಡೆದ ೨೫ ನೇ ವರ್ಷದ ಕೊಡವ ಕುಟುಂಬಗಳ ನಡುವಿನ ಹಾಕಿ ಪಂದ್ಯಾವಳಿಯಲ್ಲಿ ಮಂಡೇಪಂಡ ಕುಟುಂಬ ತಂಡವು ಮುದ್ದಂಡ ಕಪ್ ಗೆದ್ದುಕೊಂಡಿದೆ. ಇಂದು ನಡೆದ ಫೈನಲ್ಸ್ ನಲ್ಲಿ ಮಂಡೇಪಂಡ ತಂಡವು ಚೇಂದಂಡ ತಂಡದ ವಿರುದ್ಧ ೧-೦ ಗೋಲುಗಳಿಂದ ಗೆಲುವು ಪಡೆಯಿತು. ಪಂದ್ಯದ ಸಂದರ್ಭದಲ್ಲಿ ಸುರಿದ ಮಳೆಯಿಂದಾಗಿ ತೀರ್ಪುಗಾರರ ತೀರ್ಮಾನದಂತೆ ಮುನ್ನಡೆ ಸಾಧಿಸಿದ್ದ ಮಂಡೇಪಂಡ ತಂಡವನ್ನು ವಿಜೇತ ತಂಡ ಎಂದು ಘೋಷಿಸಲಾಯಿತು.

<><><>

ಕರ್ನಾಟಕವನ್ನು ಕ್ರೀಡಾ ಚಟುವಟಿಕೆಗಳ ಕೇಂದ್ರವನ್ನಾಗಿ ಮಾಡುವಲ್ಲಿ ಮತ್ತು ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಲು ಮ್ಯಾರಾಥಾನ್ ಮಹತ್ವದ್ದಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಟಿಸಿಎಸ್ ವರ್ಲ್ಡ್ ೧೦ ಕೆ ಮ್ಯಾರಥಾನ್ ಗೆ ಚಾಲನೆ ನೀಡಿ ಅವರು, ಮಾತನಾಡಿದರು. ಮಾಣಿಕ್ ಷಾ ಪರೇಡ್ ಮೈದಾನದಿಂದ ಶುರುವಾದ ಓಟ ನಗರದ ವಿವಿಧ ಭಾಗಗಳಲ್ಲಿ ಸಂಚರಿತು. ೧೦ಕೆ ಓಟದಲ್ಲಿ ಉಗಾಂಡದ ಸಾರಾ ಚೆಲಂಗಟ್ ಮತ್ತು ಜೋಶುವಾ ಚೆಪ್ಟೆಗೆಯ್ ತಮ್ಮ ವಿಭಾಗಗಳಲ್ಲಿ ಗೆಲುವು ಸಾಧಿಸಿ, ತಲಾ ೨೬,೦೦೦ ಡಾಲರ್ ಬಹುಮಾನ ಪಡೆದಿದ್ದಾರೆ.

<><><><>

ಇನ್ನು ಹವಾ ವರ್ತಮಾನ

ರಾಜ್ಯದ ವಿವಿಧೆಡೆ ಮುಂದಿನ ಒಂದು ವಾರ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಇಂದು ರಾಜ್ಯದ ೧೯ ಜಿಲ್ಲೆಗಳಿಗೆ ಹಳದಿ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಯ ಹಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯವಳಿಯ ಎರಡನೇ ಪಂದ್ಯದಲ್ಲಿಂದು ದೆಹಲಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>